**2ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ ನ್ಯಾಯಾಲಯ, ನಂಜನಗೂಡು**

**ಸಿ.ಸಿ. ಸಂಖ್ಯೆ:1918/2018**

ಫಿರ್ಯಾದಿ : ಆರ್ ಗೋಪಾಲ್ ಬಿನ್ ಲೇಃರಂಗಯ್ಯ, 63 ವರ್ಷ,
ಮನೆ ನಂ:627, ಒಕ್ಕಲಗೇರಿ, ನಂಜನಗೂಡು ಟೌನ್.

ವಿರುದ್ಧ

ಆರೋಪಿ : ರೇಖಾ ಸಿ ಕೆ ಕೋಂ ರಾಘವೇಂದ್ರ ವಿ ಎಸ್., 35 ವರ್ಷ,
ಗುರುಕುಲ ಶಾಲೆ ಟೀಚರ್,
ವಾಸ: ಎಂಡಿಸಿಸಿ ಬ್ಯಾಂಕ್ ಎದುರುಗಡೆ ಮನೆ,
ಆರ್ ಪಿ ರಸ್ತೆ, ನಂಜನಗೂಡು ಟೌನ್.

: ಆರೋಪಣೆ :

ಶ್ರೀಮತಿ ಶಶಿಕಲಾ ಜಿ, ಬಿ.ಎ, ಎಲ್‌ಎಲ್‌ಬಿ 2ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ನಂಜನಗೂಡು, ಆದ ನಾನು ನಿಮ್ಮ ಮೇಲೆ ಈ ಕೆಳಕಂಡ ಆಪಾದನೆಯನ್ನು ಹೊರೆಸುವುದೇನೆಂದರೇ:

ಮೇಲ್ಕಂಡ ಆರೋಪಿಯಾದ ನೀವು ಮತ್ತು ಫಿರ್ಯಾದುದಾರರು ಪರಿಚಯಸ್ಥರಾಗಿದ್ದು, ಸದರಿ ಪರಿಚಯದ ಆಧಾರದ ಮೇಲೆ ಆರೋಪಿಯಾದ ನೀವು ನಿಮ್ಮ ದರದು ನಿಮಿತ್ತ ಅಂದರೆ ಮುಬ್ಬೆ ಸಾಲ ತೀರಿಸಲು ಮತ್ತು ಗೃಹಕೃತ್ಯದ ಖರ್ಚಿಗೂ ಹಣದ ಅವಶ್ಯಕತೆ ಇದೆ ಎಂದು ಫಿರ್ಯಾದುದಾರರಿಂದ ದಿ:21.05.2016 ರಂದು ರೂ.50,000/-ಗಳನ್ನು ಸಾಲವನ್ನು ಪಡೆದುಕೊಂಡು ಸದರಿ ಸಾಲಕ್ಕೆ ಮಾಹೇಯಾನ ಶೇ:1.50 ರಂತೆ ಬಡ್ಡಿ ಪಾವತಿಸಲು ಒಪ್ಪಿ ಒಂದು ಆನ್ ಡಿಮ್ಯಾಂಡ್ ಪ್ರನೋಟ್ ಪತ್ರ ಮತ್ತು ಹಣಸಂದ ರಶೀದಿಯನ್ನು ಬರೆದುಕೊಟ್ಟಿರುತ್ತೀರಿ ಸದರಿ ಮೊಬಲಗಿನ ಮರುಪಾವತಿಗಾಗಿ ಆರೋಪಿಯಾದ ನೀವು ಉಳಿತಾಯ ಖಾತೆ ಹೊಂದಿರುವ ಐಸಿಐಸಿಐ ಬ್ಯಾಂಕ್ , ಚಿಕ್ಕಮಂಗಳೂರು ಶಾಖೆ, ಚಕ್ ನಂ:000637 ಗೆ ಬಡ್ಡಿ ಸೇರಿ ರೂ.67,000/- ಗಳನ್ನು ದಿನಾಂಕ:15.05.2018 ಎಂದು ನಮೂದಿಸಿ ಫಿರ್ಯಾದುದಾರರ ಹೆಸರಿಗೆ ನೀಡಿದ್ದು, ತದನಂತರ ಪಿರ್ಯಾದುದಾರರು ಸದರಿ ಚಕ್ಕನ್ನು ನಗದೀಕರಿಸಿಕೊಳ್ಳಲು ತಮ್ಮ ಉಳಿತಾಯ ಖಾತೆಯಿರುವ ಇಂಡಿಯಾನ್ ಬ್ಯಾಂಕ್, ನಂಜನಗೂಡು ಶಾಖೆಯ ಬ್ಯಾಂಕಿನ ಮೂಲಕ ಹಾಜರುಪಡಿಸಿದಾಗ ಸದರಿ ಬ್ಯಾಂಕಿನವರು "ಚೆಕ್ ಹಣವನ್ನು ನಗದೀಕರಿಸಲು ಸಾಧ್ಯವಿಲ್ಲ' ಎಂಬ ಹಿಂಬರಹದೊಂದಿಗೆ

Rekha C.K.

[signature]
8/2/23

ದಿ:22.05.2018 ರಂದು ನಗದೀಕೃತಗೊಳ್ಳದೆ ತಿರಸ್ಕೃತಗೊಂಡಿರುತ್ತದೆ ಎಂದು ತಿಳಿಸಿರುತ್ತಾರೆ. ಅನಂತರ ಪಿರ್ಯಾದುದಾರರು ಮೇಲ್ಕಂಡ ವಿಷಯವನ್ನು ನಮೂದಿಸಿ ವಕೀಲರ ಮೂಲಕ ನಿಮಗೆ ದಿ:31.05.2018 ರಂದು ನೋಟಿಸನ್ನು ಕಳುಹಿಸಿದ್ದು, ಸದರಿ ನೋಟೀಸನ್ನು ಆರೋಪಿಯಾದ ನೀವು ತಿರಸ್ಕರಿಸಿದ್ದು, ಈ ಸಂಬಂಧ ನೀವು ಯಾವುದೇ ಕ್ರಮ ಕೈಗೊಳ್ಳದೇ ಇದ್ದುದರಿಂದ ಆರೋಪಿಯಾದ ನೀವು ನೀವು ವರ್ಗಾವಣೆ ಲಿಖಿತ ಅಧಿನಿಯಮ ಕಲಂ 138 ರಡಿಯಲ್ಲಿ ದಂಡನೀಯವಾದ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯಲ್ಲಿ ಎಸಗಿರುವಿರೆಂದು ನಿಮ್ಮ ಮೇಲೆ ಅಪಾದಿಸಲಾಗಿದೆ.

ಪ್ರಶ್ನೆ-1 : ಈಗ ಓದಿ ಹೇಳಿದ ನಿಮ್ಮ ಮೇಲಿನ ಆಪಾದನೆಯನ್ನು ಕೇಳಿದ್ದೀರಾ?

ಉತ್ತರ : ಹೌದು

ಪ್ರಶ್ನೆ-2 : ಸದರೀ ಆಪಾದನೆಗಳನ್ನು ಒಪ್ಪಿಕೊಳ್ಳುವೆಯೋ? ಅಥವಾ ಪ್ರತಿರಕ್ಷೆ ಮಾಡಿಕೊಳ್ಳುವಿರೋ ?

ಉತ್ತರ : ತಪ್ಪು ಮಾಡಿಲ್ಲ. ವಿಚಾರಣೆಯಾಗಬೇಕು

*(ಮೇಲ್ಕಂಡ ಆಪಾದನೆಯನ್ನು ಆರೋಪಿತನಿಗೆ ಕನ್ನಡದಲ್ಲಿ ಓದಿ ಹೇಳಿ ನಂತರ ಅವರು ಉತ್ತರಿಸಿದಂತೆಯೇ ಬರೆದುಕೊಂಡಿದ್ದು ಸಂಪೂರ್ಣ ಹಾಗೂ ಸರಿಯಾದ ಮಾಹಿತಿಯನ್ನೊಳಗೊಂಡಿದೆಯೆಂದು ದಿನಾಂಕ 08.02.2023 ರಂದು ತೆರೆದ ನ್ಯಾಯಾಲಯದಲ್ಲಿ ದೃಢೀಕರಿಸುತ್ತೇನೆ).*

8/2/23

*2ನೇ ಹೆಚ್ಚುವರಿ ಸಿ.ಜೆ. ಮತ್ತು ಜೆ.ಎಂ.ಎಫ್.ಸಿ.*
*ನಂಜನಗೂಡು*

Rekha C.K.